ಓ.ಎಸ್. ನಂಃ **39/2024**<br>ಡಿ ಡಬ್ಲ್ಯೂಃ **1**

ದಿನಾಂಕಃ 15-11-2025 ರಂದು ಸಾಕ್ಷಿದಾರರನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

## ಪಾಟೀ ಸವಾಲುಃ ವಾದಿಯ ಪರ ಶ್ರೀ ಡಿ ಎಂ ವಕೀಲರಿಂದಃ

ವಾದಿಯರು ನನ್ನ ಮೊಮ್ಮಕ್ಕಳಾಗಿರುತ್ತಾರೆ ಎಂದರೆ ಸರಿ. 2 ರಿಂದ 5 ನೇ ಪ್ರತಿವಾದಿಯರು ನನ್ನ ಮಕ್ಕಳಾಗಿರುತ್ತಾರೆ ಎಂದರೆ ಸರಿ. ನನ್ನ ಗಂಡನ ಹೆಸರು ತಾಯಪ್ಪ ಎಂದು ಇರುತ್ತದೆ ಎಂದರೆ ಸರಿ. ನನ್ನ ಮಾವನ ಹೆಸರು ಹಣಮಂತ ದನಕಾಯೋರು ಎಂದು ಇತ್ತು ಎಂದರೆ ಸರಿ. ದಾವಾ ಆಸ್ತಿಗಳು ನಿಮ್ಮ ಮನೆತನದ ಹಿರಿಯರ ಆಸ್ತಿಗಳಲು ಆಗಿರುತ್ತವೆ ಎಂದರೆ ಸಾಕ್ಷಿಯು ಸರಿಯಲ್ಲ, ಸಾಕ್ಷಿ ನಾನು ಸಂಪಾದಿಸಿರುವ ಆಸ್ತಿಗಳು ಆಗಿರುತ್ತವೆ ಎಂದು ನುಡಿಯುತ್ತಾರೆ. ನಾನು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ನಾನು ಮುಂಬೈಯಲ್ಲಿ ದುಡಿದು ಸಂಪಾದಿಸಿದ ಹಣದಿಂದ ಆಸ್ತಿ ಸಂಪಾದಿಸಿರುತ್ತೇನೆ. ನಾನು ಮುಂಬೈಯಲ್ಲಿ ದುಡಿದು ಆಸ್ತಿ ಸಂಪಾದಿಸಿರುತ್ತೇನೆ ಎಂದು ನನ್ನ ಪ್ರತಿವಾದ ಪತ್ರ ಹಾಗೂ ಪ್ರಮಾಣ ಪತ್ರದಲ್ಲಿ ಬರೆಸಿರುತ್ತೇನೆ. ನಾನು ಆ ರೀತಿ ಬರೆಸದೇ ಈಗ ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ದಾವಾ ಆಸ್ತಿಗಳು ನಮ್ಮ ಮನೆತನದ ಹಿರಿಯರ ಹಾಗೂ ಜಂಟಿ ಕುಟುಂಬದ ಆಸ್ತಿಗಳಾಗಿರುತ್ತವೆ ಎಂದರೆ ಸರಿಯಲ್ಲ.

2. 6 ನೇ ಪ್ರತಿವಾದಿ ನಮ್ಮ ಕುಟುಂಬಕ್ಕೆ ಸಬಂಧಿಸಿರುವುದಿಲ್ಲ ಎಂದರೆ ಸರಿ. 6 ನೇ ಪ್ರತಿವಾದಿಗೂ ಹಾಗೂ ದಾವಾ ಆಸ್ತಿಗಳಿಗೂ ಸಂಬಂಧ ಇರುವುದಿಲ್ಲ ಎಂದರೆ ಸರಿ. ವಾದಿಯರನ್ನು ಅವರ ತಾಯಿ ನೋಡಿಕೊಳ್ಳುತ್ತಾರೆ ಎಂದರೆ ಸರಿ. ದಾವಾ ಆಸ್ತಿಗಳಿಗೆ ಸಂಬಂಧಿಸಿದಂತೆ ಪಾಲು ಮಾಡಿಕೊಂಡಿದ್ದೀರಾ ಎಂದರೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. ನೀವು, ವಾದಿಯರು ಹಾಗೂ 2 ರಿಂದ 5 ನೇ ಪ್ರತಿವಾದಿಯರು ದಾವಾ ಆಸ್ತಿಗಳ ಜಂಟಿ ಮಾಲಿಕರು ಹಾಗೂ ಕಬ್ಜೆದಾರರಾಗಿರುತ್ತೀರಿ ಎಂದರೆ ಸಾಕ್ಷಿಯು ಮೊದಲು ಹೌದು ಎಂದು ನುಡಿದು ಆ ನಂತರ ಪಾಲು ಕೊಡುವುದಿಲ್ಲ ಎಂದು ನುಡಿಯುತ್ತಾರೆ. 6 ನೇ ಪ್ರತಿವಾದಿಗೆ ಆಸ್ತಿ ಮಾರಾಟ ಮಾಡುವ ಹಕ್ಕು ನಿಮಗೆ ಇರಲಿಲ್ಲ ಎಂದರೆ ಸಾಕ್ಷಿಯು ನನ್ನ ಗಂಡ ಸಾಯುವ ಕಾಲಕ್ಕೆ ಮಾರಾಟ ಮಾಡಿರುತ್ತಾರೆ ಎಂದು ನುಡಿಯುತ್ತಾರೆ. ನಿಮ್ಮ ಗಂಡನಿಗೂ ಮಾರಾಟ ಮಾಡುವ ಹಕ್ಕು ಇರಲಿಲ್ಲ ಎಂದರೆ ಸಾಕ್ಷಿಯು ತಾನು ಗಳಿಸಿದ

ಆಸ್ತಿಯನ್ನು ತಾನು ಮಾರಾಟ ಮಾಡಿ ಸಾಯುತ್ತೇನೆ ಎಂದು ನನ್ನ ಗಂಡ ಹೇಳಿದ್ದರು ಎಂದು ನುಡಿಯುತ್ತಾರೆ. ವಾದಿಯರು ಈ ಹಿಂದೆ ದಾವೆ ದಾಖಲು ಮಾಡಿದ್ದರು ಎಂದು ಪ್ರತಿವಾದ ಪತ್ರದಲ್ಲಿ ಬರೆಸಿರುವ ಬಗ್ಗೆ ನಿಮಗೆ ಮಾಹಿತಿ ಇದೆಯೇ ಎಂದರೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. 2024 ರ ಪೆಬ್ರುವರಿ ತಿಂಗಳಿನಲ್ಲಿ ನೀವು ಪಾಲು ಕೊಡುವುದಿಲ್ಲ ಎಂದು ತಿಳಿಸಿದ್ದರಿಂದ ವಾದಿಯರು ದಾವೆ ದಾಖಲು ಮಾಡಿದ್ದಾರೆ ಎಂದರೆ ಸಾಕ್ಷಿಯು ನಾನು ಪಾಲು ಕೊಡುವುದಿಲ್ಲ ಎಂದು ನುಡಿಯುತ್ತಾರೆ. ವಾದಿಯರಿಗೆ ಪಾಲು ಕೊಡಬಾರದೆಂಬ ಉದ್ದೇಶದಿಂದ ನಾನು ಸುಳ್ಳು ಪ್ರತಿವಾದ ಪತ್ರ ಹಾಗೂ ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. 6 ನೇ ಪ್ರತಿವಾದಿ ದಾವಾ ಆಸ್ತಿಗಳ ಸ್ವಾದೀನದಲ್ಲಿ ಇರುವುದಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಗಳಲ್ಲಿ ವಾದಿಯರಿಗೂ ಸಹ ಹಿಸ್ಸಾ ಹಕ್ಕು ಇದೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇರುವುದಿಲ್ಲ**.**

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

ಓ. ಹೇ. ಕೇ. ಸರಿ ಇದೆ.

ಸಿವಿಲ್ ಮತ್ತು ಜೆ.ಎಂ.ಎಫ್.ಸಿ
ನ್ಯಾಯಾಧೀಶರು ಯಾದಗಿರಿ